**ಕರ್ನಾಟಕ ವಿಧಾನ ಪರಿಷತ್ತು**

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 12ನೇ ಜುಲೈ, 2016**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

**01. ಪ್ರಶ್ನೋತ್ತರ**

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

**02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

ಅ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಗಳ ರೀತ್ಯಾ.

ಆ) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ **2016ನೇ ಸಾಲಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕ**ವನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.

**03. ವರದಿಗಳನ್ನೊಪ್ಪಿಸುವುದು**

**ಅ) ಶ್ರೀ ಎಸ್.ವ್ಹಿ. ಸಂಕನೂರ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತೊಂದನೆಯ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ಆರ್. ಧರ್ಮಸೇನಾ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2015-16ನೇ ಸಾಲಿನ 14ನೇ ವಿಧಾನ ಸಭೆಯ ನಾಲ್ಕನೇ ವರದಿಯನ್ನು ಒಪ್ಪಿಸುವುದು.

**04. ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕ, 2016**

**ಶ್ರೀ ಎಚ್.ಕೆ. ಪಾಟೀಲ್** (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2

## ೦೫. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ವರಾಹಿ ನೀರಾವರಿ ಯೋಜನೆಯ ಕಾಲುವೆಯನ್ನು ಉಡುಪಿ ತಾಲ್ಲೂಕಿನ ಹೆಜಮಾಡಿಯವರೆಗೂ ಮುಂದುವರೆಸಿ, ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ **ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ದಬ್ಬೆಗಟ್ಟ ಹೋಬಳಿ, ಅಬಲಕಟ್ಟೆ ಎಸ್.ಸಿ. ಕಾಲೋನಿಯ ನಾಗರೀಕರು ಹಾಗೂ ಇತರರಿಗೆ ಸಾರ್ವಜನಿಕ ರಸ್ತೆ ಇಲ್ಲದೆ ತೊಂದರೆಯಾಗುತ್ತಿರುವುದರಿಂದ ಹಾಲಿ ನಕಾಶೆದಾರಿಯಲ್ಲಿ "One time development" ಯೋಜನೆಯಡಿಯಲ್ಲಿ ರಸ್ತೆ ಮಂಜೂರಾತಿ ಬಗ್ಗೆ **ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ** ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

**ಅ) ಶ್ರೀ ರಾಮಚಂದ್ರಗೌಡ** ಅವರು ಬೆಂಗಳೂರು ನಗರದ ಕೆಲವು ಕೆರೆಗಳಲ್ಲಿ ವಿಷಯುಕ್ತ ಹಾಗೂ ಹಾನಿಕಾರಕವಾದ ನೊರೆ ಸಮಸ್ಯೆಯಿಂದಾಗಿ ಲಕ್ಷಾಂತರ ಮೀನುಗಳು ಸಾವನ್ನಪ್ಪಿದ್ದು ಹಾಗೂ ಕೆರೆಗಳ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯಕ್ಕೆ ದುಷ್ಪರಿಣಾಮವುಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ೧೯೯೩-೯೪ ಮತ್ತು ೧೯೯೪-೯೫ರಲ್ಲಿ ಸೇವೆ ಸಲ್ಲಿಸಿ, ಶೇ ೫೫% ಕ್ಕಿಂತ ಕಡಿಮೆ ಅಂಕ ಪಡೆದ ಅರೆಕಾಲಿಕ ಉಪನ್ಯಾಸಕರುಗಳ ಸೇವಾ ಸಕ್ರಮಾತಿ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**

## ೦೭. ಅರ್ಧ ಗಂಟೆ ಕಾಲಾವಧಿ ಚರ್ಚೆ

ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಬಗ್ಗೆ ದಿನಾಂಕ: ೦೪.೦೭.೨೦೧೬ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: ೧೮೩(೧೫೨೧)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ಮೋಟಮ್ಮ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---